ಮಂಜೂರಾಗಿವೆಯೇ? ಮಂಜೂರಾತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

ಇ) ವೈದ್ಯಾಧಿಕಾರಿಗಳ ಹುದ್ದೆ ಖಾಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು? ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರವಾದ ಮಾಹಿತಿ ನೀಡುವುದು);

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ವಿಜಾಪುರ ಜಿಲ್ಲೆಯಲ್ಲಿ ಒಟ್ಟು 53 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಅವುಗಳ ಪೈಕಿ, 5 ಹೊಸದಾಗಿ ಪ್ರಾರಂಭಿಸಲಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸೇರಿವೆ. 2010–11ನೇ ಸಾಲಿನಲ್ಲಿ 2 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಮಂಜೂರಾತಿಯನ್ನು ನೀಡಲಾಗಿದೆ.

ಆ) ಹೊಸದಾಗಿ ಪ್ರಾರಂಭಿಸಲಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅವಶ್ಯವಿರುವ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.

ಇ) ವಿಜಾಪುರ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಅಲಸಂಗಿ ಹೊರತುಪಡಿಸಿ ಉಳಿದ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳ ಹುದ್ದೆಗಳು ಭರ್ತಿಯಾಗಿರುತ್ತವೆ.

ಹೊಸದಾಗಿ ಸಮುದಾಯ ಆರೋಗ್ಯ ಕೇಂದ್ರಗಳನ್ನು ಪ್ರಾಂಭಿಸಿರುವ ತಜ್ಞ ವೈದ್ಯರ ನೇಮಕ

170 (361): **ಶ್ರೀ ಎಂ. ಬಿ. ಪಾಟೀಲ್ (ಬಬಲೇಶ್ವರ):** ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) 2010–11ನೇ ಸಾಲಿನಲ್ಲಿ ವಿಜಾಪುರ ಜಿಲ್ಲೆಯಲ್ಲಿ ಹೊಸದಾಗಿ ಪ್ರಾರಂಭಿಸಲಾದ ಸಮುದಾಯ ಆರೋಗ್ಯ ಕೇಂದ್ರಗಳು ಎಷ್ಟು;

ಆ) ಸದರಿ ಸಮುದಾಯ ಆರೋಗ್ಯ ಕೇಂದ್ರಗಳಿಗೆ ನೇಮಕ ಮಾಡಿರುವ ತಜ್ಞ ವೈದ್ಯರ ಸಂಖ್ಯೆ ಎಷ್ಟು (ಸಮುದಾಯ ಕೇಂದ್ರಗಳ ಹೆಸರು ಹಾಗೂ ತಜ್ಞ ವೈದ್ಯರ ವಿವರವಾದ ಮಾಹಿತಿ ನೀಡುವುದು);

ಇ) ತಜ್ಞ ವೈದ್ಯರನ್ನು ನೇಮಿಸದೆ ಇರುವ ಸಮುದಾಯ ಆರೋಗ್ಯ ಕೇಂದ್ರಗಳು ಎಷ್ಟು; ತಜ್ಞ ವೈದ್ಯರ ನೇಮಕಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಿ ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 2010–11ನೇ ಸಾಲಿನಲ್ಲಿ ವಿಜಾಪುರ ಜಿಲ್ಲೆಯಲ್ಲಿ ಯಾವುದೇ ಸಮುದಾಯ ಆರೋಗ್ಯ ಕೇಂದ್ರಗಳನ್ನು ಹೊಸದಾಗಿ ಪ್ರಾರಂಭಿಸಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ

ದೇವರ ಹಿಪ್ಪರಗಿ ಮತ್ತು ಹೂವಿನ ಹಿಪ್ಪರಗಿ ಬಸ್ ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸುವುದು

168 (359) ಶ್ರೀ ಎ. ಎಸ್. ಪಾಟೀಲ್ (ದೇವರ ಹಿಪ್ಪರಗಿ): ಮಾನ್ಯ ಒಳಾಡಳಿತ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಿಜಾಪುರ ಜಿಲ್ಲೆಯ ದೇವರ ಹಿಪ್ಪರ್ಗಿ ಮತ್ತು ಹೂವಿನ ಹಿಪ್ಪರ್ಗಿ ಬಸ್ ನಿಲ್ದಾಣಗಳು ಮೇಲ್ದರ್ಜೆಗೇರಿಸಲಾಗಿದೆಯೇ;

ಆ) ಮೇಲ್ದರ್ಜೆಗೇರಿಸಿದ್ದಲ್ಲಿ ಎಷ್ಟು ಹಣ ಮಂಜೂರಾಗಿದೆ. ಸದರಿ ಹಣದಲ್ಲಿ ಯಾವ ಯಾವ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು;

ಇ) ಹೂವಿನ ಹಿಪ್ಪರ್ಗಿ ಬಸ್ ನಿಲ್ದಾಣ ಪ್ರಕರಣ ನ್ಯಾಯಾಲಯದಲ್ಲಿ ಇತ್ಯರ್ಥವಾಗಿದೆಯೇ;

ಈ) ಇತ್ಯರ್ಥವಾಗಿದ್ದಲ್ಲಿ ನ್ಯಾಯಾಲಯ ಯಾವ ತೀರ್ಪು ನೀಡಿದೆ ಮತ್ತು ಯಾವಾಗ ನೀಡಿದೆ;

ಉ) ತೀರ್ಪು ನೀಡಿದ ನಂತರ ಸದರಿ ಬಸ್ ನಿಲ್ದಾಣದಲ್ಲಿ ಅಬಿವೃದ್ಧಿ ಕಾಮಗಾರಿಗಳು ನಡೆಯುತ್ತಿದೆಯೇ?

ಶ್ರೀ ಆರ್. ಅಶೋಕ್ (ಒಳಾಡಳಿತ ಮತ್ತು ಸಾರಿಗೆ ಸಚಿವರು):

ಅ) ಹೌದು, ಈ ಬಸ್ ನಿಲ್ದಾಣಗಳನ್ನು ಭಾಗಶಃ ಮೇಲ್ದರ್ಜೆಗೇರಿಸಲಾಗಿದೆ.